**ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ**

**ಭೀಮ ಗಾಯನ ವಿಶೇಷ ಅಭಿಯಾನ**

**Date: 10-03-2026**



ಬೆಂಗಳೂರು ನಗರಜಿಲ್ಲೆಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯ್ತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಅಂಬೇಡ್ಕರ್ ಅಧ್ಯಯನ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ

ಸೆಂಟ್ರಲ್ ಕಾಲೇಜಿನ ಜ್ಞಾನಜ್ಯೋತಿ ಸಭಾಂಗಣದಲ್ಲಿ ಭೀಮ ಗಾಯನ ವಿಶೇಷ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಬುದ್ಧ, ಬಸವ, ಗಾಂಧಿ, ಅಂಬೇಡ್ಕರ್ ಅವರ ಸಮಾಜ ಸುಧಾರಣೆಯ ವಿಚಾರಧಾರೆಗಳನ್ನು ಹಾಡುಗಳ ಮೂಲಕ ಜನಮಾನಸದಲ್ಲಿ ಜಾಗೃತಗೊಳಿಸುವ ಕರ್ನಾಟಕ ಸರ್ಕಾರದ ಘನ ಉದ್ದೇಶದ ಅಂಗವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ. ಜಿ. ಸಮಾರಂಭವನ್ನು ಉದ್ಘಾಟಿಸಿದರು. ಸಾಮಾಜಿಕ ಸಮಾನತೆಯ ಹರಿಕಾರ ಬಸವಣ್ಣನವರ ಮಾರ್ಗದಲ್ಲಿ ಜಾತಿ, ಧರ್ಮ, ವರ್ಗ ಮತ್ತು ಲಿಂಗ ತಾರತಮ್ಯಗಳ ನಿವಾರಣೆಗೆ ಡಾ. ಬಿ.ಆರ್. ಅಂಬೇಡ್ಕರ್ ಅವಿರತವಾಗಿ ಹೋರಾಡಿದರೆಂದು ಅವರು ಸ್ಮರಿಸಿದರು.

ಭಾರತ ಸರ್ಕಾರದ ಪ್ರಥಮ ಕಾನೂನು ಸಚಿವರಾದ ಸಂವಿಧಾನಶಿಲ್ಪಿ ಅಂಬೇಡ್ಕರ್ ರವರು ಮಹಿಳಾ ಹಕ್ಕುಗಳ ರಕ್ಷಣೆಗಾಗಿ ಅಧಿಕಾರ ತ್ಯಾಗ ಮಾಡಿದ ಮಹನೀಯರೆಂದು ಅವರು ಬಣ್ಣಿಸಿದರು. ಇದೇ ವೇಳೆ ಸ್ತ್ರೀ ಶಿಕ್ಷಣದ ರೂವಾರಿಯಾದ ಸಾವಿತ್ರಿಬಾಯಿ ಫುಲೆಯವರ ಮಹಾನ್ ಕೊಡುಗೆಯನ್ನು ಅವರು ಸ್ಮರಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ರಮೇಶ್. ಬಿ. ಅವರು ಶಿಕ್ಷಣ ಮತ್ತು ಕೌಶಲ್ಯ ಕಲಿಕೆಯ ಜೊತೆಗೆ ಶ್ರೇಷ್ಠ ಚಿಂತಕರು ಪ್ರತಿಪಾದಿಸಿದ ಸಾಮಾಜಿಕ ಮೌಲ್ಯಗಳನ್ನು ರೂಢಿಸಿಕೊಳ್ಳುವಂತೆ ವಿದ್ಯಾರ್ಥಿಗಳನ್ನು ಉತ್ತೇಜಿಸಿದರು.

ವಿಶೇಷ ಆಹ್ವಾನಿತರಾಗಿ ಆಗಮಿಸಿದ್ದ ಕರ್ನಾಟಕ ಜಾನಪದ ಅಕಾಡೆಮಿಯ ನಿಕಟಪೂರ್ವ ಅಧ್ಯಕ್ಷರಾದ ಪ್ರಖ್ಯಾತ ಗಾಯಕ ಪಿಚ್ಚಳ್ಳಿ ಶ್ರೀನಿವಾಸ್ ಅವರು ಯುವ ಮನಸ್ಸುಗಳಲ್ಲಿ ವೈಚಾರಿಕ ಮನೋಭಾವ ಬೆಳೆಸುವ ವಿಶ್ವವಿದ್ಯಾನಿಲಯದ ಪ್ರಯತ್ನವನ್ನು ಶ್ಲಾಘಿಸಿದರು.

ವಿಶ್ವವಿದ್ಯಾನಿಲಯದ ಅಂಬೇಡ್ಕರ್ ಅಧ್ಯಯನ ಕೇಂದ್ರದ ನಿರ್ದೇಶಕರಾದ ಪ್ರೊ.ಕೆ.ಆರ್.ಜಲಜಾ ಹಾಗೂ ಸಿಂಡಿಕೇಟ್ ಸದಸ್ಯರಾದ ಡಾ. ಫ್ರಾನ್ಸಿಸ್ ಅಲ್ಮೇಡಾ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪ ನಿರ್ದೇಶಕರಾದ ಪಲ್ಲವಿ ಹೊನ್ನಾಪುರ ಪ್ರಾಸ್ತಾವಿಕವಾಗಿ ಮಾತನಾಡಿ ಭೀಮ ಗಾಯನ ಅಭಿಯಾನದ ಉದ್ದೇಶವನ್ನು ವಿವರಿಸಿದರು. ಇದೇ ವೇಳೆ ಅವರು ಸಂವಿಧಾನ ಪೀಠಿಕೆಯನ್ನು ಬೋಧಿಸಿದರು.

ಮೈಸೂರಿನ ಅಮ್ಮ ವಸುಂಧರೆ ಕಲಾತಂಡದವರು ಜಾಗೃತಿ ಗೀತೆಗಳನ್ನು ಪ್ರಸ್ತುತಪಡಿಸಿದರು. ಮಂಜುಳ ಕೋಲಾರ ಕಾರ್ಯಕ್ರಮ ನಿರೂಪಿಸಿದರು. ಕನ್ನಡ ವಿಭಾಗದ ಉಪನ್ಯಾಸಕರಾದ ಡಾ ಮಂಜು ಸಿ.ಎನ್. ಅತಿಥಿಗಳನ್ನು ಸ್ವಾಗತಿಸಿದರು.








ಶ್ರೀ ಸಿದ್ದರಾಮಯ್ಯ
ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ನಗರ ಜಿಲ್ಲೆ
ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರ, ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಇವರ ಸಹಭಾಗಿತ್ವದಲ್ಲಿ
ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಮಹಾತ್ಮ ಗಾಂಧಿ, ಭಗವಾನ್ ಬುದ್ಧ ಹಾಗೂ
ಬಸವಣ್ಣನಂತಹ ಸಮಾಜ ಸುಧಾರಕರ ವಿಚಾರ ಧಾರೆಗಳನ್ನು ಹಾಡುಗಳ
ಮೂಲಕ ಜನಮಾನಸದಲ್ಲಿ




ಶ್ರೀ ಸಿದ್ದರಾಮಯ್ಯ
ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ನಗರ ಜಿಲ್ಲೆ
ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರ, ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಇವರ ಸಹಭಾಗಿತ್ವದಲ್ಲಿ
ಶ್ರೀ ಡಿ.ಕೆ. ಶಿವಕುಮಾರ್
ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಮಹಾತ್ಮ ಗಾಂಧಿ, ಭಗವಾನ್ ಬುದ್ಧ ಹಾಗೂ
ಬಸವಣ್ಣನಂತಹ ಸಮಾಜ ಸುಧಾರಕರ ವಿಚಾರ ಧಾರೆಗಳನ್ನು ಹಾಡುಗಳ
ಮೂಲಕ ಜನಮಾನಸದಲ್ಲಿ ಜಾಗೃತಗೊಳಿಸಲು
‘ಭೀಮ ಗಾಯನ’
10ನೇ ಮಾರ್ಚ್ 2026, ಮಂಗಳವಾರದಂದು ಬೆಳಿಗ್ಗೆ 10:00 ಗಂಟೆಗೆ
ಸ್ಥಳ: ಜ್ಞಾನಜ್ಯೋತಿ ಸಭಾಂಗಣ, ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ,
ಅರಮನೆ ರಸ್ತೆ, ಬೆಂಗಳೂರು ನಗರ - 560001